ರಾಜ್ಯದಲ್ಲಿ 'ಎ' & 'ಬಿ' ಸ್ಕೀಂನಲ್ಲಿ ಹಂಚಿಕೆಯಾಗಿರುವ ನೀರಿನ ಪ್ರಮಾಣ

36 (196) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) : ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ 'ಎ' ಮತ್ತು 'ಬಿ' ಸ್ಕೀಮಿನಡಿಯಲ್ಲಿ ಹಂಚಿಕೆಯಾದ ನೀರಿನ ಪ್ರಮಾಣವೆಷ್ಟು (ಜಿಲ್ಲಾವಾರು ವಿವರ ನೀಡುವುದು)?

ಆ) ಹಾಗಿದ್ದಲ್ಲಿ, ಕೊಪ್ಪಳ ಜಿಲ್ಲೆಯ ರೈತರುಗಳಿಗೆ ಸಿಂಗಟಲೂರು ಏತ ನೀರಾವರಿ ಯೋಜನೆಯ 'ಎ' ಮತ್ತು 'ಬಿ' ಸ್ಕೀಮಿನಡಿ ನಿಗದಿ ಪಡಿಸಿರುವ ನೀರಿನ ಪ್ರಮಾಣದಿಂದ ಅತೀ ಸಣ್ಣ ಹಾಗೂ ಬಡ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಸರ್ಕಾರವು ತೆಗೆದುಕೊಂಡ ಕ್ರಮಗಳೇನು?

ಶ್ರೀ ಬಸವರಾಜ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು) :

ಅ) ಕೃಷ್ಣಾ ಜಲ ವಿವಾದ ನ್ಯಾಯಾಧೀಕರಣದಿಂದ ರಾಜ್ಯಕ್ಕೆ ಕೃಷ್ಣಾ ಕೊಳ್ಳದಲ್ಲಿ 729+5 ಟಿ.ಎಂ.ಸಿ. ನೀರು ಸ್ಕೀಂ 'ಎ' ಅಡಿಯಲ್ಲಿ ಹಂಚಿಕೆಯಾಗಿರುತ್ತದೆ. ಯೋಜನಾವಾರು ನೀರಿನ ಮರು ಹಂಚಿಕೆ ಮಾಡಲಾಗಿದೆ (ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ). ಸ್ಕಿಂ 'ಬಿ' ನೀರಿನ ಹಂಚಿಕೆಯ ವಿಷಯವು ನ್ಯಾಯಾಧೀಕರಣದ ಮುಂದಿದೆ.

ಆ) ಸಿಂಗಟಲೂರು ಏತ ನೀರಾವರಿ ಯೋಜನೆಗೆ ಸ್ಕೀಂ 'ಎ' ಅಡಿಯಲ್ಲಿ ಒಟ್ಟು 18.55 ಟಿಎಂಸಿ ನೀರನ್ನು ಹಂಚಿಕೆ ಮಾಡಲಾಗಿದೆ. ಈ ಪೈಕಿ ಮೊದಲ ಹಂತದಲ್ಲಿ 7.64 ಟಿಎಂಸಿ, ಎರಡನೆ ಹಂತದಲ್ಲಿ 4.39 ಟಿಎಂಸಿ ಹಾಗೂ ಈ ಹಂತಗಳು ಪೂರ್ಣಗೊಂಡ ನಂತರ ಇನ್ನುಳಿದ 6.52 ಟಿಎಂಸಿ ನೀರನ್ನು ಸಮಗ್ರವಾಗಿ ಬಳಸಿಕೊಳ್ಳಲಾಗುವುದು.

ಈ ಯೋಜನೆಯಿಂದ 67,584. ಹೇ ಪ್ರದೇಶಕ್ಕೆ ನೀರಾವರಿ ಯೋಜನೆ ಸೌಲಭ್ಯ ಲಭ್ಯವಾಗಲಿರುವುದರಿಂದ ರೈತರಿಗೆ ಅನುಕೂಲವಾಗಲಿದೆ.

ಇ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಕೊಪ್ಪಳದಲ್ಲಿ ಜಿಲ್ಲಾ ಕ್ರೀಡಾಂಗಣದ ಕಾಮಗಾರಿ ಸ್ಥಗಿತಗೊಂಡಿರುವ ಬಗ್ಗೆ

37 (197) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) : ಮಾನ್ಯ ಜವಳಿ, ಯುವಜನ ಸೇವಾ ಮತ್ತು ಕ್ರೀಡಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಪ್ಪಳ ನಗರಕ್ಕೆ ಮಂಜೂರಾಗಿರುವ ಜಿಲ್ಲಾ ಕ್ರೀಡಾಂಗಣದ ಕಾಮಗಾರಿಯು ಪೂರ್ಣವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಇನ್ನೂ ಎಷ್ಟು ಕಾಲಾವಕಾಶ ಬೇಕಾಗುವುದು;

ಇ) ಸದರಿ ಕ್ರೀಡಾಂಗಣಕ್ಕೆ ಈವರೆವಿಗೂ ಬಿಡುಗಡೆಯಾಗಿರುವ ಅನುದಾನದ ಮೊತ್ತ ಎಷ್ಟು;

ಈ) ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲು ಹೆಚ್ಚುವರಿ ಅನುದಾನ ಬೇಕೆಂಬ ಬೇಡಿಕೆಯನ್ನು ಜಿಲ್ಲಾಡಳಿತವು ಸರ್ಕಾರಕ್ಕೆ ಸಲ್ಲಿಸಿರುವುದು ನಿಜವಲ್ಲವೆ;

ಉ) ಹಾಗಿದ್ದಲ್ಲಿ, ಸರ್ಕಾರವು ಹೆಚ್ಚುವರಿ ಅನುದಾನವನ್ನು ಬಿಡುಗಡೆ ಮಾಡುವುದೇ; ಎಷ್ಟು ಪ್ರಮಾಣದಲ್ಲಿ ಬಿಡುಗಡೆ ಮಾಡುವುದು;

ಊ) ಜಿಲ್ಲಾ ಕ್ರೀಡಾಂಗಣಕ್ಕೆ ಮೂಲಭೂತ ಸೌಲಭ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಋ) ಹಾಗಿದ್ದಲ್ಲಿ, ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಎ) ಹಾಗಿದ್ದಲ್ಲಿ, ಸರ್ಕಾರ ಯಾವಾಗ ಮೂಲಭೂತ ಸೌಲಭ್ಯಗಳನ್ನು ಒದಗಿಸುತ್ತದೆ? (ವಿವರಗಳನ್ನು ನೀಡುವುದು);

ಶ್ರೀ ಗೂಳಿಹಟ್ಟಿ ಡಿ. ಶೇಖರ್ (ಜವಳಿ, ಯುವಜನ ಸೇವೆ ಮತ್ತು ಕ್ರೀಡಾ ಸಚಿವರು) :

ಅ) ಬಂದಿದೆ.

ಆ) ಜಿಲ್ಲಾ ಕ್ರೀಡಾಂಗಣ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. ಕೊಪ್ಪಳ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಕ್ರೀಡಾಂಗಣ ಸಮಿತಿಯು ಇದ್ದು, ಈ ಕ್ರೀಡಾಂಗಣ ಸಮಿತಿಯು ಕ್ರೀಡಾಂಗಣ ಕಾಮಗಾರಿಯನ್ನು ಪೂರ್ಣಗೊಳಿಸಲು ಅಗತ್ಯ ಕ್ರಮ ವಹಿಸುತ್ತಿದೆ.

ಇ) ಈ ಕ್ರೀಡಾಂಗಣಕ್ಕೆ ಕೇಂದ್ರ ಪುರಸ್ಕೃತ ಯೋಜನೆಯಡಿ ಒಂದು ಬಾರಿ ಅನುದಾನವಾಗಿ ರೂ. 130.00 ಲಕ್ಷ ಅನುದಾನವನ್ನು 2005–06ನೇ ಸಾಲಿನಲ್ಲಿ ಬಿಡುಗಡೆಗೊಳಿಸಲಾಗಿದೆ. ಇದಲ್ಲದೇ ರಾಜ್ಯ ಸರ್ಕಾರವು

ರೂ. 25.00 ಲಕ್ಷ ಅನುದಾನವನ್ನು 1998–99ನೇ ಸಾಲಿನಲ್ಲಿ ಬಿಡುಗಡೆ ಗೊಳಿಸಲಾಗಿದೆ.

ಈ) ಹೌದು.

ಉ) ಹೆಚ್ಚುವರಿ ರೂ. 233.65 ಲಕ್ಷಗಳ ಅನುದಾನ ಕೋರಿಕೆಯ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಊ) ಜಿಲ್ಲಾ ಕ್ರೀಡಾಂಗಣದಲ್ಲಿ ಅಗತ್ಯವಾದ ಮೂಲಭೂತ ಸೌಲಭ್ಯಗಳೊಂದಿಗೆ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ.

ಋ) ನಿರ್ಮಾಣ ಕಾಮಗಾರಿ ಪೂರ್ಣಗೊಂಡ ನಂತರ 400 ಮೀ ಓಟದ ಪಥ, ಪ್ರೇಕ್ಷಕರ ಗ್ಯಾಲರಿ, ಖೋಖೋ, ಕಬ್ಬಡ್ಡಿ, ವಾಲಿಬಾಲ್ ಅಂಕಣಗಳು ಕ್ರೀಡಾಂಗಣದ ಜಿಮ್ ಸೌಲಭ್ಯ ಮಹಿಳೆ ಹಾಗೂ ಪುರುಷ ಕ್ರೀಡಾಪಟುಗಳಿಗೆ ಪ್ರತ್ಯೇಕವಾಗಿ ಬಟ್ಟೆ ಬದಲಾಯಿಸುವ ಕೊಠಡಿ, ಶೌಚಾಲಯ ಇತ್ಯಾದಿ ಸೌಲಭ್ಯಗಳನ್ನು ಒದಗಿಸಲಾಗುವುದು.

ಎ) ಜಿಲ್ಲಾ ಕ್ರೀಡಾಂಗಣ ಸಮಿತಿ ಆದಷ್ಟು ಶೀಘ್ರ ಅಗತ್ಯ ಕ್ರಮ ವಹಿಸಲು ಸೂಚಿಸಲಾಗುವುದು.

ಕೊಪ್ಪಳ ಕ್ಷೇತ್ರದಲ್ಲಿ ನೆರೆ ಹಾವಳಿಯಿಂದ ತೊಂದರೆಗೀಡಾಗಿರುವುದು

38 (198) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಪ್ಪಳ ತಾಲ್ಲೂಕಿನ ಹಿರೆಹಳ್ಳ ಅಣೆಕಟ್ಟಿನ ವ್ಯಾಪ್ತಿಯಲ್ಲಿ ಭಾರಿ ಮಳೆ ಬಿದ್ದಾಗ ಆ ಭಾಗದ ಸುತ್ತಮುತ್ತಲ (ಇನ್ನಿತರ) ಹಳ್ಳಿಗಳಾದ, ಗುನ್ನಳ್ಳಿ, ಕಾಟ್ರಳ್ಳಿ, ಭೂದಿಹಾಳ, ಚಿಕ್ಕಸಿಂಧೋಗಿ, ಹಿರೇಸಿಂಧೋಗಿ, ಡಂಬ್ರಳ್ಳಿ ಹಾಗೂ ಇನ್ನಿತರ ಹಳ್ಳಿಗಳಲ್ಲಿ ನೀರಿನ ಹರಿವಿನಿಂದ ಸದರಿ ಗ್ರಾಮಗಳು ನೆರೆ ಹಾವಳಿ ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಸದರಿ ಗ್ರಾಮಗಳನ್ನು ನವಗ್ರಾಮ ಮಾಡುವ ಪ್ರಸ್ತಾವನೆಯು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಸರ್ಕಾರವು ಹಾಕಿಕೊಂಡಿರುವ ಕಾರ್ಯಕ್ರಮಗಳ ರೂಪುರೇಷೆಗಳೇನು;

ಇ) ಸದರಿ ಗ್ರಾಮಗಳ ರೈತರ ಜಮೀನುಗಳಿಗೆ ನೀರು ನುಗ್ಗಿ ಈ ಒಂದು ವರ್ಷದಲ್ಲಿ ಹಿಂಗಾರು ಮತ್ತು ಮುಂಗಾರು ಬೆಳೆಗಳು ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ, ಜಮೀನಿನ ವಿವರ ನೀಡುವುದು;